ಆ) (೧) ಮಂಜೂರಾದ ಉಪನ್ಯಾಸಕರ ಸಂಖ್ಯೆ 0೭

(೨) ಕೊರತೆ ಇರುವ ಉಪನ್ಯಾಸಕರ ಸಂಖ್ಯೆ 0೨

ಇ) ಪ್ರತಿ ಬಾರಿ ಖಾಲಿ ಹುದ್ದೆಗಳ ಬಗ್ಗೆ ಮಾಹಿತಿ ಬಂದ ನಂತರ, ಸದರಿ ಹುದ್ದೆಗಳನ್ನು ಭರ್ತಿ, ಮಾಡುತ್ತಲೇ ಬಂದಿದ್ದು ಕೆಲವರು ಹೋಗಿ ಹಾಜರಾಗದೆ ಇದ್ದ ಪ್ರಯುಕ್ತ ಎರಡು ಹುದ್ದೆಗಳು ಖಾಲಿ ಇರುತ್ತವೆ. ಈ ಪೈಕಿ ಕನ್ನಡ ಉಪನ್ಯಾಸಕರ ಹುದ್ದೆಗೆ ಈಗ ನೇಮಿಸಲಾಗಿದೆ. ಆಂಗ್ಲಭಾಷಾ ವಿಷಯದ ಹುದ್ದೆಗೆ ಅಭ್ಯರ್ಥಿಗಳು ಇರುವುದಿಲ್ಲ. ಅವರು ದೊರೆತ ಕೂಡಲೇ ನೇಮಿಸಲಾಗುವುದು.

ಉಡುಪಿ ತಾಲ್ಲೂಕಿನಲ್ಲಿ ಪಠ್ಯಪುಸ್ತಕಗಳನ್ನು ಸಮರ್ಪಕವಾಗಿ ವಿತರಣೆ ಮಾಡದಿರುವುದು

೩೫೯. ಶ್ರೀ ವಸಂತ ವಿ. ಸಾಲ್ಯಾನ್ (ಕಾಪು).—ಮಾನ್ಯ ಶಿಕ್ಷಣ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ೧೯೮೫-೮೬ನೇ ಶೈಕ್ಷಣಿಕ ವರ್ಷ ಮುಗಿಯುಂತ್ತಾ ಬಂದಿದ್ದರೂ ಉಡುಪಿ ತಾಲ್ಲೂಕಿನಲ್ಲಿ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳು ಸಮರ್ಪಕವಾಗಿ ವಿತರಣೆಯಾಗಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಏನು ಕ್ರಮ ಕೈಗೊಂಡಿದ್ದಾರೆ.

ಶ್ರೀ ಎಂ. ರಘುಪತಿ (ಶಿಕ್ಷಣ ಸಚಿವರು).—

ಅ) ಇಲ್ಲ.

ಆ) ಪೋಲಿನ ಉತ್ತರದಿಂದಾಗಿ ಈ ಪ್ರಶ್ನೆಯು ಉದ್ಭವಿಸುವುದಿಲ್ಲ. ಸಂಬಂಧಪಟ್ಟ ಅಧಿಕಾರಿಗಳ ಬೇಡಿಕೆಗಳಂತೆ ಪಠ್ಯಪುಸ್ತಕಗಳನ್ನು ವಿತರಣೆ ಮಾಡಲಾಗಿದೆ.

ಕಿತ್ತೂರಿನ ಗ್ರಾಮದಲ್ಲಿ ಮಹಿಳೆಯರಿಗಾಗಿ ವಿಶ್ವವಿದ್ಯಾನಿಲಯ ಸ್ಥಾಪನೆ.

೧೪೯. ಶ್ರೀ ಮಲ್ಲಾರ ಗೌಡ ಎಸ್. ಪಾಟೀಲ್ (ಸಂಕೇಶ್ವರ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಣೆಚೆನ್ನಮ್ಮನ ಹೆಸರಿನಲ್ಲಿ ಕಿತ್ತೂರು ಗ್ರಾಮದಲ್ಲಿ ಮಹಿಳಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರದವರು ತೆಗೆದುಕೊಂಡ ಕ್ರಮವೇನು ?

ಆ) ಕಳೆದ ಬಾರಿ ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದಾಗ ಆದಷ್ಟು ತೀವ್ರವಾಗಿ ಕಾರ್ಯರೂಪಕ್ಕೆ ತರುವುದಾಗಿ ಸರ್ಕಾರದವರು ಹೇಳಿಕೆ ನೀಡಿದ್ದು ಅದನ್ನು ಪೂರ್ತಿ ಗೊಳಿಸಲು ತಗಲುವ ಪೊತ್ತವೆಷ್ಟು ?

ಇ) ಕಿತ್ತೂರಿನಲ್ಲಿ ಇರುವ ಹೆಣ್ಣು ಮಕ್ಕಳ ವಸತಿ ಶಾಲೆಯನ್ನು ವೈದ್ಯಕೀಯ ಹಾಗೂ ಇಂಜಿನಿಯರಿಂಗ್ ಕಾಲೇಜು ಮಾಡುವುದರಲ್ಲಿ ತೆಗೆದುಕೊಂಡಿರುವ ಸರ್ಕಾರದ ನಿಲುವೇನು ?

ಈ) ರಾಣೆಚೆನ್ನಮ್ಮ ಮಹಿಳಾ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸುವುದಕ್ಕಾಗಿ ನಿಗದಿಪಡಿಸಿರುವ ದಿನಾಂಕ ಯಾವುದು ?

ಶ್ರೀ ಎಂ. ರಘುಪತಿ (ಶಿಕ್ಷಣ ಸಚಿವರು) —

ಅ) ಮಹಿಳಾ ವಿಶ್ವವಿದ್ಯಾಲಯ ಸ್ಥಾಪಿಸುವ ಬಗ್ಗೆ ವಿಶ್ವವಿದ್ಯಾಲಯ ಧನ ಸಹಾಯ ಆಯೋಗದೊಂದಿಗೆ ಚರ್ಚಿಸಲಾಯಿತು. ಆವರ ಪ್ರತಿಕ್ರಿಯೆ ಪ್ರೋತ್ಸಾಹದಾಯಕವಾಗಿರಲಿಲ್ಲವಾದ್ದರಿಂದ, ಸಧ್ಯಕ್ಕೆ ಈ ಯೋಜನೆಯನ್ನು ಕೈಬಿಡಲಾಗಿದೆ.

ಆ) ಇಂತಹ ವಿಶ್ವವಿದ್ಯಾಲಯ ಸ್ಥಾಪಿಸಿದರೆ ಪೂರ್ಣ ವೆಚ್ಚ ರಾಜ್ಯ ಸರ್ಕಾರವೇ ಭರಿಸಬೇಕಾಗಿದೆ. ಅಂದಾಜು ವೆಚ್ಚ ಆನಾವರ್ತಕ ೧೦ ಕೋಟಿ ರೂಪಾಯಿಗಳು. ಆವರ್ತಕ ವಾರ್ಷಿಕ ೨.೫೦ ಕೋಟಿ ರೂ. ಬರಲಿದೆ.